ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

683 (1008) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಖಾಲಿ ಇರುವ ಬೋಧಕರ ಹಾಗೂ ಬೋಧಕೇತರ ಸಿಬಂದಿಗಳ ಸಂಖ್ಯೆ ಎಷ್ಟು; ಅವು ಯಾವುವು; ಯಾವಾಗಿನಿಂದ ಈ ಹುದ್ದೆಗಳು ಖಾಲಿ ಇವೆ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಯಾವ ಕಾಲಮಿತಿಯೊಳಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?